All India Radio: Bangalore
Regional Bulletin In Kannada
29.11.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ಬದಲಾವಣೆ ವಿಚಾರ ; ನವದೆಹಲಿಯಲ್ಲಿ ನಾಳೆ ಸೋನಿಯಾ ಗಾಂಧಿ ಮಹತ್ವದ ಸಭೆ
- ದೇಶದ ಮೊದಲ ದೇಶೀಯ ಸಾರಸ್ ಎಂಕೆ-೨ ಐರನ್ ಬರ್ಡ್ ಪರೀಕ್ಷಾ ಸೌಲಭ್ಯಕ್ಕೆ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಚಾಲನೆ
- ಬೆಳಗಾವಿ ಅಧಿವೇಶನದಲ್ಲಿ ಉತ್ತರಕರ್ನಾಟಕದ ಸಮಸ್ಯೆಗಳ ಚರ್ಚೆ ಬಗ್ಗೆ ಆದ್ಯತೆ ನೀಡುವಂತೆ ಬಿಜೆಪಿ ಆಗ್ರಹ
- ನಾಳೆ ಮನ್ ಕಿ ಬಾತ್‌ನ ೧೨೮ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮನದ ಮಾತು
- ಬೆಂಗಳೂರಿನ ವಸತಿ ಸಮುಚ್ಚಯದಲ್ಲಿ ಕರುಳುಬೇನೆ ಪ್ರಕರಣ ಪತ್ತೆ ; ಆರೋಗ್ಯ ಇಲಾಖೆ ಅಧಿಕಾರಿಗಳಿಂದ ಪರಿಶೀಲನೆ

***************

ಕಳೆದ ಹಲವು ದಿನಗಳಿಂದ ಗೊಂದಲ ಸೃಷ್ಟಿಸಿದ್ದ ಮುಖ್ಯಮಂತ್ರಿ ಬದಲಾವಣೆ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ತೆರೆ ಎಳೆದಿದ್ದಾರೆ.

ನಮ್ಮ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಳಗಾವಿ ಅಧಿವೇಶನದಲ್ಲಿ ಬಿಜೆಪಿ-ಜೆಡಿಎಸ್‌ಅನ್ನು ಜಂಟಿಯಾಗಿ ಎದುರಿಸಲಾಗುವುದು ಎಂದು ಹೇಳಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಗೆ ತಾವು ಬದ್ಧ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ರಾಜಕೀಯವಾಗಿ ನಮ್ಮಿಬ್ಬರದು ಒಂದೇ ತೀರ್ಮಾನ ಎಂದು ಸ್ಪಷ್ಟಪಡಿಸಿದ್ದಾರೆ.

***************

ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆ ಬಿಕ್ಕಟ್ಟಿನ ಕುರಿತಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಜೊತೆ ಸುದೀರ್ಘ ಸಭೆ ನಡೆಸಿದ್ದಾರೆ.

ಮುಖ್ಯವಾಗಿ ನಾಯಕತ್ವ ಬದಲಾವಣೆಯಾದರೆ ಸಾಧಕ-ಬಾಧಕಗಳ ಬಗ್ಗೆ ಚರ್ಚೆ ನಡೆಸಲಾಗಿದೆ.

ನಾಳೆ ರಾಜ್ಯ ರಾಜಕೀಯ ಬೆಳವಣಿಗೆ ಕುರಿತಂತೆ ಸೋನಿಯಾಗಾಂಧಿ ನೇತೃತ್ವದಲ್ಲಿ ನವದೆಹಲಿಯಲ್ಲಿ ಮಹತ್ವದ ಸಭೆ ನಡೆಯಲಿದೆ. ಸಭೆಯಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತ ಎಲ್ಲಾ ಗೊಂದಲಗಳಿಗೆ ಹೈಕಮಾಂಡ್ ತೆರೆ ಎಳೆಯಲಿದೆ.

***************

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಬೆಂಗಳೂರಿನ ಸಿಎಸ್‌ಐಆರ್-ಎನ್‌ಎಎಲ್ ನಲ್ಲಿ ದೇಶದ ಮೊದಲ ದೇಶೀಯ ಸಾರಸ್ ಎಂಕೆ-೨ ಐರನ್ ಬರ್ಡ್ ಪರೀಕ್ಷಾ ಸೌಲಭ್ಯವನ್ನು ಇಂದು ಉದ್ಘಾಟಿಸಿದರು. ೧೯ ಆಸನ ಸಾಮರ್ಥ್ಯದ ಲಘು ಸಾರಿಗೆ ವಿಮಾನ ವರ್ಗದ ಸಾರಸ್ ಎಂಕೆ-೨ ವಿಮಾನದ ಅಭಿವೃದ್ಧಿಗೆ ಈ ಸೌಲಭ್ಯ ನಿರ್ಣಾಯಕ ಪಾತ್ರ ವಹಿಸಲಿದೆ.

ಇದೇ ವೇಳೆ ಅವರು, ಎಚ್‌ಎಪಿ ಏರ್‌ಫ್ರೇಮ್ ಫ್ಯಾಬ್ರಿಕೆಷನ್ ಸೌಲಭ್ಯ ಹಾಗೂ ಹಂಸ-೩ ವಿಮಾನವನ್ನು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಡಾ. ಜಿತೇಂದ್ರ ಸಿಂಗ್, ಸಾರಸ್ ಎಂಕೆ-೨ ಭಾರತದ ಮೊದಲ ಸ್ವದೇಶಿ ವಿನ್ಯಾಸದ ನಾಗರಿಕ ಸಾರಿಗೆ ವಿಮಾನವಾಗಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಆತ್ಮನಿರ್ಭರ ಭಾರತದ ಕನಸಿಗೆ ಇದು ಮತ್ತೊಂದು ದೃಢ ಹೆಜ್ಜೆಯಾಗಿದೆ ಎಂದು ಹೇಳಿದರು.

ಇದೇ ವೇಳೆ ನಾಗ್ಪುರದ ಸೋಲಾರ್ ಡಿಫೆನ್ಸ್ ಅಂಡ್ ಏರೋಸ್ಪೇಸ್ ಲಿಮಿಟೆಡ್ ಹಾಗೂ ಸಿಎಸ್‌ಐಆರ್-ಎನ್‌ಎಎಲ್ ನಡುವೆ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು.

***************

ಶೀಘ್ರದಲ್ಲೇ ಸರ್ಕಾರಿ ಶಾಲೆಗಳಗೆ ೧೨ ಸಾವಿರ ಮತ್ತು ಅನುದಾನಿತ ಶಾಲೆಗಳಿಗೆ ೬ ಸಾವಿರ ಸೇರಿ ಒಟ್ಟು ೧೮ ಸಾವಿರ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಿನಿಂದಲೇ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಪೂರಕ ತಯಾರಿ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳ ಉತ್ತಮ ಫಲಿತಾಂಶಕ್ಕೆ ಇಲಾಖೆ ಸಹಕಾರ ನೀಡಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

***************

ಈ ಬಾರಿಯ ಅಧಿವೇಶನವನ್ನು ೮ ದಿನಗಳ ಬದಲು ೨೦ ದಿನಗಳ ಕಾಲ ನಡೆಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿ ಇಂದು ಬಿಜೆಪಿ-ಜೆಡಿಎಸ್ ಸಮನ್ವಯ ಸಮಿತಿ ಸಭೆ ಬಳಿಕ ಮಾತನಾಡಿದ ಅವರು, ಈ ಬಾರಿ ಉತ್ತರಕರ್ನಾಟಕದ ಸಮಸ್ಯೆಗಳ ಬಗ್ಗೆ ಹೆಚ್ಚು ಚರ್ಚೆ ನಡೆಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಸರ್ಕಾರಿ ಶಾಲೆಗಳ ದುಸ್ಥಿತಿ, ಶಿಕ್ಷಕರ ನೇಮಕ, ಬೆಂಗಳೂರಿನ ಗುಂಡಿ-ರಸ್ತೆಗಳ ಕುರಿತಂತೆ ಪೊಲೀಸರ ವರ್ಗಾವಣೆ ಕುರಿತಂತೆ ಸರ್ಕಾರದ ವಿರುದ್ಧ ಧ್ವನಿ ಎತ್ತಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್‌ನ ೧೨೮ ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮವು ಎಲ್ಲಾ ಆಕಾಶವಾಣಿ ಮತ್ತು ದೂರದರ್ಶನ ವಾಹಿನಿಗಳು, ಆಕಾಶವಾಣಿ ಸುದ್ದಿ ವೆಬ್‌ಸೈಟ್ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.

ಇದನ್ನು ಆಕಾಶವಾಣಿ ಜಾಲತಾಣ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

***************

ಬೆಂಗಳೂರಿನ ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ವಸಂತಪುರ ವಾರ್ಡ್‌ನ ಫಾಲ್ಕನ್ ಸಿಟಿ ವಸತಿ ಸಮುಚ್ಚಯದಲ್ಲಿ ಕರುಳುಬೇನೆ ಪ್ರಕರಣ ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ೨೦ ಜನರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ.

ವಸತಿ ಸಮುಚ್ಚಯದಲ್ಲಿ ಯಾವುದೇ ಸಭೆ, ಸಮಾರಂಭಗಳನ್ನು ಮುಂದಿನ ಆದೇಶದವರೆಗೆ ನಡೆಸದಿರಲು ಸೂಚಿಸಲಾಗಿದೆ.

ವಸತಿ ಸಮುಚ್ಚಯದ ಆಡಳಿತ ಮಂಡಳಿಗೆ ನೋಟಿಸ್ ಜಾರಿ ಮಾಡಲಾಗಿದ್ದು, ನೀರಿನ ಮೂಲಗಳನ್ನು ಹಾಗೂ ಶೇಖರಣಾ ತೊಟ್ಟಿಗಳನ್ನು, ಟ್ಯಾಂಕ್‌ಗಳನ್ನು ಶುದ್ಧೀಕರಿಸಿ ವಿಶ್ವ ಆರೋಗ್ಯ ಸಂಸ್ಥೆಯ

ಮಾನದಂಡಗಳ ಅನುಸಾರ ನಿಯಂತ್ರಿಸಲು ಸೂಚನೆ ನೀಡಲಾಗಿದೆ ಎಂದು ದಕ್ಷಿಣ ನಗರ ಪಾಲಿಕೆ ಪ್ರಕರಣದಲ್ಲಿ ತಿಳಿಸಿದೆ.

***************

ರಾಜ್ಯದ ಹಲವು ಜಿಲ್ಲೆಗಳಲ್ಲಿ ನಕಲಿ ಮದ್ಯ ಮಾರಾಟ ಹೆಚ್ಚುತ್ತಿದ್ದು, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಸಭೆಯ, ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಅಬಕಾರಿ ಕಾಯ್ದೆ ಮತ್ತು ಕಾನೂನುಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು ಎಂದು ಸೂಚಿಸಿದ್ದಾರೆ.

ವಿವಿಧ ಮಾದರಿಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿ, ಏಳು ದಿನಗಳೊಳಗೆ ಸಮಗ್ರ ವರದಿ ಸಲ್ಲಿಸಬೇಕು ಹಾಗೂ ವರದಿ ಬಂದ ಕೂಡಲೇ, ಅಗತ್ಯವಿರುವ ಕಾನೂನು ಕ್ರಮವನ್ನು ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

***************

ದಿತ್ವಾ ಚಂಡಮಾರುತವು ತಮಿಳುನಾಡು ಸಮೀಪಿಸಿದ್ದು, ಮುಂದಿನ ೪೮ ಗಂಟೆಗಳಲ್ಲಿ ತಮಿಳುನಾಡಿನ ಕೆಲವು ಭಾಗಗಳಲ್ಲಿ ಭಾರೀ ಮಳೆಯಾಗಲಿದೆ. ಇದರ ಪರಿಣಾಮ ರಾಜ್ಯದಲ್ಲಿಯೂ ಇಂದು ಮತ್ತು ನಾಳೆ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಚಂಡಮಾರುತದ ಪರಿಣಾಮ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಉಷ್ಣಾಂಶ ಇಳಿಮುಖವಾಗಿದೆ ಎಂದು ಆಕಾಶವಾಣಿಗೆ ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಮಾಹಿತಿ ನೀಡಿದ್ದಾರೆ.

ಇಂದು ಮತ್ತು ನಾಳೆ ಚಳಿಯ ವಾತಾವರಣ ಕಂಡು ಬರಲಿದೆ ಎಂದು ಅವರು ತಿಳಿಸಿದ್ದಾರೆ.

ಧ್ವನಿ : ಡಾ.ಸಿ.ಎಸ್. ಪಾಟೀಲ್ (  ಸೆಕೆಂಡ್‌ಗಳು)

***************

ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ ೨೦೧೬ ಅನುಷ್ಠಾನದಲ್ಲಿ ರಾಜ್ಯದಲ್ಲಿಯೇ ಉತ್ತರ ಕನ್ನಡ ಜಿಲ್ಲೆ ಮಾದರಿಯಾಗಿದೆ ಎಂದು ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ತಿಳಿಸಿದ್ದಾರೆ.

ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-೨೦೦೯ರ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಕ್ಕಳ ರಕ್ಷಣಾ ನೀತಿ ಅನುಷ್ಠಾನದಲ್ಲಿ ಉತ್ತರ ಕನ್ನಡ ಜಿಲ್ಲೆ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

ಮಕ್ಕಳಿಗೆ ಗುಣಮಟ್ಟದ ಕಲಿಕೆಯ ಜೊತೆ ಮಕ್ಕಳ ಸುರಕ್ಷತೆಯೂ ಅಷ್ಟೇ ಮುಖ್ಯವಾಗಿದೆ ಎಂದು ತಿಳಿಸಿದ್ದಾರೆ.

ಶಾಲೆ ಬಿಟ್ಟ ಮಕ್ಕಳು ಯಾವ ಕಾರಣಕ್ಕೆ ಶಾಲೆ ಬಿಟ್ಟಿದ್ದಾರೆ ಎಂಬುದರ ಕುರಿತು ನಿರ್ದಿಷ್ಟ ಕಾರಣ ಗುರುತಿಸಿ ರಚನಾತ್ಮಕ ಪರಿಹಾರ ನೀಡಬೇಕು. ಪ್ರತಿ ೩ ತಿಂಗಳಿಗೊಮ್ಮೆ ನಡೆಯುವ ಸಿಡಬ್ಲ್ಯುಸಿ ಸಭೆಯಲ್ಲಿ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

*******ಮುಕ್ತಾಯ********